**ಕರ್ನಾಟಕ ಸರ್ಕಾರ**

ಸಂಖ್ಯೆ: ಹಿಂವಕ 90 ಬಿಇಟಿ 2016 (ಭಾ-2)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:27.06.2017.

**ತಿದ್ದುಪಡಿ ಆದೇಶ**

ವಿಷಯ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್-ಡಿ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 336 ಬಿಇಟಿ 2015, ದಿ: 5.11.2015
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 90 ಬಿಇಟಿ 2016 ಭಾಗ, ದಿ:29.9.2016
3. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 90 ಬಿಇಟಿ 2016 (ಭಾಗ-2), ದಿನಾಂಕ:2.6.2017
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸಿಬ್ಬಂದಿ-4/ಸಿಆರ್-8/2015-16, ದಿನಾಂಕ:27.06.2017

******

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 1547 ಅಡುಗೆಯವರು ಮತ್ತು 2470 ಅಡುಗೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿಯನ್ನು ನೀಡಿದ್ದು, ಈ ಹುದ್ದೆಗಳ ಭರ್ತಿಗಾಗಿ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ, ಸ್ವೀಕರಿಸಲಾಗಿರುವ ಅರ್ಜಿಗಳಿಂದ 1:5 ಅನುಪಾತದಲ್ಲಿ ದಾಖಲಾತಿ ಪರಿಶೀಲನೆ ಹಾಗೂ 1:3 ಅನುಪಾತದಲ್ಲಿ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ಕೆಳಗಿನಂತೆ ದಿನಾಂಕಗಳನ್ನು ನಿಗದಿಪಡಿಸಿ ಓದಲಾದ (3)ರಲ್ಲಿ, ಆದೇಶ ಹೊರಡಿಸಲಾಗಿದೆ.

| ಹುದ್ದೆಗಳ ವಿವರ | ದಾಖಲಾತಿಗಳ ಪರಿಶೀಲನೆ ದಿನಾಂಕ | ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆ ದಿನಾಂಕ | ತಾತ್ಕಾಲಿಕ ಆಯ್ಕೆ ಪಟ್ಟಿ ಹೊರಡಿಸುವುದು. | ಅಂತಿಮ ಆಯ್ಕೆ ಪಟ್ಟಿ ಹೊರಡಿಸುವುದು. (ಆಕ್ಷೇಪಣೆಗಳಿಗೆ ಸಮಜಾಯಿಷಿ ನೀಡಿದ ನಂತರ) |
|---|---|---|---|---|
| ಅಡುಗೆಯವರು | 22.6.2017 | 28.6.2017 | 03.7.2017 | 18.7.2017 |
| ಅಡುಗೆ ಸಹಾಯಕರು | 23.6.2017 | 29.6.2017 | 03.7.2017 | 18.7.2017 |

ಮೇಲೆ ಓದಲಾದ 3 ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿ, ದಾಖಲಾತಿ ಪರಿಶೀಲನೆಯನ್ನು ಅಡುಗೆಯವರು ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ:22.06.2017ರಂದು ಹಾಗೂ ಅಡುಗೆ ಸಹಾಯಕರು ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ:23.06.2017ರಂದು ಪೂರ್ಣಗೊಳಿಸಲಾಗಿರುತ್ತದೆ. ದಾಖಲಾತಿ ಪರಿಶೀಲನೆಗೆ 1:5ರಂತೆ ಅರ್ಹ ಅಭ್ಯರ್ಥಿಗಳನ್ನು ಆಹ್ವಾನಿಸಲಾಗಿದ್ದು ಇದರಲ್ಲಿ ಅರ್ಹರಾದ ಅಭ್ಯರ್ಥಿಗಳಲ್ಲಿ 1:3 ರಂತೆ ಪ್ರವರ್ಗವಾರು/ಮೀಸಲಾತಿವಾರು ಪಟ್ಟಿ ತಯಾರಿಸಿ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ

ಆಹ್ವಾನಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಕೆಲವು ಜಿಲ್ಲೆಗಳಲ್ಲಿ ಕೆಲವು ಪ್ರವರ್ಗಗಳಲ್ಲಿ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ 1:3 ರ ಅಭ್ಯರ್ಥಿಗಳ ಕೊರತೆಯಿದ್ದು 1:1, 1:2 ಅಭ್ಯರ್ಥಿಗಳು ಲಭ್ಯವಿರುತ್ತಾರೆ.

ದಿನಾಂಕ:25.06.2017 ಹಾಗೂ 26.06.2017ರಂದು ಸಾರ್ವತ್ರಿಕ ರಜಾ ದಿನಗಳಾಗಿರುವುದರಿಂದ ರಾಜ್ಯ ಎನ್.ಐ.ಸಿ. ಯು ಕಾರ್ಯನಿರ್ವಹಿಸಿರುವುದಿಲ್ಲ. ಕೆಲವು ಜಿಲ್ಲೆಗಳಲ್ಲಿ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ 1:3 ರಂತೆ ಅರ್ಹರಾದ ಅಭ್ಯರ್ಥಿಗಳ ವಿವರಗಳನ್ನು ಪ್ರವರ್ಗವಾರು/ಮೀಸಲಾತಿವಾರು ಅಂಕಗಳ ಆಧಾರದ ಮೇಲೆ ಪರಿಶೀಲಿಸಿ ಜಿಲ್ಲಾ ನೇಮಕಾತಿ ಸಮಿತಿಯ ಮುಂದೆ ಮಂಡಿಸಿ ಅನುಮೋದನೆ ಪಡೆಯಲು ವಿಳಂಬವಾಗಿರುತ್ತದೆ. ಅಲ್ಲದೇ, ಹೈದರಾಬಾದ್ ಕರ್ನಾಟಕ ವ್ಯಾಪ್ತಿಯ 371(ಜೆ) ಗೆ ಒಳಪಡುವ ಜಿಲ್ಲೆಗಳಲ್ಲಿ ಹೈದರಾಬಾದ್ ಕರ್ನಾಟಕ ವ್ಯಾಪ್ತಿಯ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ 371(ಜೆ) ನಮೂದಿಸಿದ್ದು, ದಾಖಲಾತಿ ಪರಿಶೀಲನೆ ಸಂದರ್ಭದಲ್ಲಿ ಹಾಜರುಪಡಿಸದೇ ಇರುವುದರಿಂದ ಇಂತಹ ಅಭ್ಯರ್ಥಿಗಳನ್ನು ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ವರ್ಗಾಯಿಸುವ ಬಗ್ಗೆ ತಂತ್ರಾಂಶವನ್ನು ಎನ್.ಐ.ಸಿ. ಯು ಒದಗಿಸಬೇಕಾಗಿದೆ. ಅಲ್ಲದೇ, ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲು ಹಾಗೂ ಈ ಅಭ್ಯರ್ಥಿಗಳಿಗೆ ಹಾಜರಾತಿ ಪತ್ರವನ್ನು ಕಳುಹಿಸಲು ಕಾಲಾವಕಾಶ ಬೇಕಾಗಿದೆ ಎಂದು ಕೆಲವು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಕೋರಿರುವ ಹಿನ್ನೆಲೆಯಲ್ಲಿ ಅಡುಗೆಯವರು ಹಾಗೂ ಅಡುಗೆ ಸಹಾಯಕರು ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ, ನಿಗದಿಪಡಿಸಿದ ದಿನಾಂಕಗಳನ್ನು ಈ ಕೆಳಗಿನಂತೆ ಮರುನಿಗದಿಪಡಿಸಿ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡುಗೆಯವರು ಹಾಗೂ ಅಡುಗೆ ಸಹಾಯಕರು ಹುದ್ದೆ ನೇರನೇಮಕಾತಿ ಪ್ರಕ್ರಿಯೆ ಸಂಬಂಧ ನಿಗದಿಪಡಿಸಲಾದ ವೇಳಾಪಟ್ಟಿಯನ್ನು ಈ ಕೆಳಗಿನಂತೆ ಮರುನಿಗದಿಪಡಿಸಿ ಮೇಲೆ ಓದಲಾದ (3)ರ ಸರ್ಕಾರದ ಆದೇಶಕ್ಕೆ ತಿದ್ದುಪಡಿ ಮಾಡಿ ಆದೇಶಿಸಲಾಗಿದೆ.

| ಹುದ್ದೆಗಳ ವಿವರ | ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ನಿಗದಿಪಡಿಸಿದ್ದ ದಿನಾಂಕ | ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ಮರುನಿಗದಿ ಪಡಿಸಿದ ದಿನಾಂಕ | ತಾತ್ಕಾಲಿಕ ಆಯ್ಕೆ ಪಟ್ಟಿ ಹೊರಡಿಸುವುದು. | ಅಂತಿಮ ಆಯ್ಕೆ ಪಟ್ಟಿ ಹೊರಡಿಸುವುದು. (ಆಕ್ಷೇಪಣೆಗಳಿಗೆ ಸಮಜಾಯಿಷಿ ನೀಡಿದ ನಂತರ) |
|---|---|---|---|---|
| ಅಡುಗೆಯವರು | 28.06.2017 | 03.07.2017 | 07.07.2017 | 22.07.2017 |
| ಅಡುಗೆ ಸಹಾಯಕರು | 29.06.2017 | 04.07.2017 | 07.07.2017 | 22.07.2017 |

ಉಳಿದಂತೆ ಮೇಲೆ ಓದಲಾದ 1, 2 ಮತ್ತು 3 ರ ಸರ್ಕಾರದ ಆದೇಶದಲ್ಲಿನ ನಿಬಂಧನೆಗಳು ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಆರ್. ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಕಳುಹಿಸುತ್ತಾ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಒದಗಿಸಲು ಕೋರಿದೆ.

**ಗೆ,**

1. ಪ್ರಧಾನ ಮಹಾಲೇಖಪಾಲರು (ಎ&ಇ) (ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.

2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳುರು.
6. ಆಯುಕ್ತರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು.
7. ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
8. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ರಸ್ತೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ(3&9), ಬೆಂಗಳೂರು.
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು– ಆಯುಕ್ತರು, ಹಿಂ.ವ.ಕ ಇಲಾಖಾ ಇವರ ಮುಖಾಂತರ.
11. ಎಲ್ಲಾ ಜಿಲ್ಲೆಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು– ಆಯುಕ್ತರು, ಹಿಂ.ವ.ಕ ಇಲಾಖಾ ಇವರ ಮುಖಾಂತರ.
12. ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು– ಆಯುಕ್ತರು, ಹಿಂ.ವ.ಕ ಇಲಾಖಾ ಇವರ ಮುಖಾಂತರ.

<u>ಪ್ರತಿಯನ್ನು, ಮಾಹಿತಿಗಾಗಿ:</u>

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.